# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **379 (345)** |
| **ಸದಸ್ಯರ ಹೆಸರು** | **ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸಬೇಕಾದ ದಿನಾಂಕ** | **10-03-2025** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| | **ಪ್ರಶ್ನೆ** | **ಉತ್ತರ** |
|---|---|---|
| ಅ) | ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯ ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಅನುದಾನಿತ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಕಾರಣಗಳಿಂದ ಖಾಲಿ ಆಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಪೈಕಿ ಬ್ಯಾಕ್ ಲಾಗ್‌ಗೆ ಸಂಬಂಧಿಸಿದ ಎಷ್ಟು ಹುದ್ದೆಗಳು ಖಾಲಿ ಇವೆ; | **ಕಾಲೇಜು ಶಿಕ್ಷಣ** ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 357 ಯುಪಿಸಿ 2002, ದಿನಾಂಕ:19.12.2002 ರಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ **ಒಟ್ಟು 313** ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿ ಮಾಡಲು ಬಾಕಿ ಉಳಿದಿರುತ್ತವೆ<br><br>**ತಾಂತ್ರಿಕ ಶಿಕ್ಷಣ** ಇಲಾಖೆಯ ವ್ಯಾಪ್ತಿಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಒಟ್ಟು 270 ಬೋಧಕ ಹಾಗೂ 432 ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿ ಮಾಡಲು ಖಾಲಿ ಇರುತ್ತವೆ. |
| ಆ) | ಈ ಹುದ್ದೆಗಳ ಭರ್ತಿಗೆ 2002 ಹಾಗೂ 2012ರಲ್ಲಿ ಅನುಮತಿ ನೀಡಿ ನೇಮಕಾತಿ ಆದೇಶ ನೀಡಿದ ನಂತರ ಪ್ರಸ್ತುತ 2001ರ ನಿಯಮ ಒಂದರ ಕಾರಣ ನೀಡಿ 2019-2020ರ ಸಾಲಿನ ನೇಮಕಾತಿ ಪ್ರಕ್ರಿಯೆ ತಡೆಹಿಡಿಯಲು ಕಾರಣವೇನು; | 2001ರ ನಿಯಮ ಕಾರಣ ನೀಡಿ ಯಾವುದೇ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿದಿರುವುದಿಲ್ಲ. ಬ್ಯಾಕ್‌ಲಾಗ್ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಲು ಇಲಾಖಾ ಹಂತದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | 05 ವರ್ಷಗಳಿಂದ ಸದರಿ ಖಾಲಿ ಹುದ್ದೆ ಭರ್ತಿ ಕಾರ್ಯ ನೆನೆಗುದಿಗೆ ಬಿದ್ದಿದ್ದು 2023ರಲ್ಲಿ ಪ್ರಸ್ತುತ ಸರ್ಕಾರ ಬಂದ ನಂತರ ಇದುವರೆಗೂ ಯಾವ ಯಾವ ಶಿಕ್ಷಣ ಸಂಸ್ಥೆಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; (ಇವುಗಳ ವಿವರ ಒದಗಿಸುವುದು) | **ಕಾಲೇಜು ಶಿಕ್ಷಣ ಇಲಾಖೆ**<br><br>ಕೋವಿಡ್-19ರ ಪ್ರಯುಕ್ತ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿದ್ದ ಕಾರಣ ಸರ್ಕಾರದ ಪತ್ರ ಸಂಖ್ಯೆ:ಇಡಿ 98 ಯುಪಿಸಿ 2020, ದಿನಾಂಕ:13-08-2020 ರಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಪ್ರಕ್ರಿಯೆ ತಡೆಹಿಡಿಯಲಾಗಿತ್ತು.<br><br>ತದನಂತರ ಸರ್ಕಾರದ ಪತ್ರ ಸಂಖ್ಯೆ:ಇಡಿ/56/ಯುಪಿಸಿ/2019(ಇ), ದಿನಾಂಕ:18.07.2022 ರಲ್ಲಿ ಆರ್ಥಿಕ ಮಿತವ್ಯಯ ಆದೇಶವನ್ನು ತೆರವುಗೊಳಿಸಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಅಗತ್ಯವಿರುವ ಎಲ್ಲಾ ವಿವರವಾದ ದಾಖಲೆಗಳೊಂದಿಗೆ ಪ್ರತ್ಯೇಕ ಪ್ರಸ್ತಾವನೆಗಳನ್ನು ಚೆಕ್‌ಲಿಸ್ಟ್ ನೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿದ್ದು, ಅದರಂತೆ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಇಲಾಖಾ ವತಿಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.<br><br>2023 ರಲ್ಲಿ ಪ್ರಸ್ತುತ ಸರ್ಕಾರ ಬಂದ ನಂತರ ಇದುವರೆಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿರುವ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಿದೆ. |

<table>
<tr>
<td></td>
<td></td>
<td>

**ತಾಂತ್ರಿಕ ಶಿಕ್ಷಣ ಇಲಾಖೆ**

2023ರ ನಂತರ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಭರ್ತಿ ಮಾಡಲಾಗಿರುವ ಬೋಧಕ ಬ್ಯಾಕ್‌ಲಾಗ್ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತದೆ.

<table>
<tr><th>ಕ್ರ. ಸಂ.</th><th>ಸಂಸ್ಥೆಯ ಹೆಸರು</th><th>ಹುದ್ದೆಗಳ ಸಂಖ್ಯೆ</th></tr>
<tr><td>1.</td><td>ಡಾ. ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯ, ಬೆಂಗಳೂರು</td><td>08</td></tr>
<tr><td>2.</td><td>ಪಿ.ಇ.ಎಸ್. ಇಂಜಿನಿಯರಿಂಗ್ ಕಾಲೇಜು, ಮಂಡ್ಯ</td><td>05</td></tr>
<tr><td>3.</td><td>ಮಲೆನಾಡು ತಾಂತ್ರಿಕ ಮಹಾವಿದ್ಯಾಲಯ, ಹಾಸನ</td><td>02</td></tr>
<tr><td>4.</td><td>ಜೆ.ಎಸ್.ಎಸ್. ಮಹಿಳಾ ಪಾಲಿಟೆಕ್ನಿಕ್, ಮೈಸೂರು</td><td>06</td></tr>
<tr><td>5.</td><td>ಬಿ.ವಿ.ವಿ.ಎಸ್ ಪಾಲಿಟೆಕ್ನಿಕ್, ಬಾಗಲಕೋಟೆ</td><td>01</td></tr>
<tr><td>6.</td><td>ಕೆ.ಹೆಚ್.ಕೆ. ಪಾಲಿಟೆಕ್ನಿಕ್, ಧಾರವಾಡ</td><td>01</td></tr>
<tr><td></td><td>ಒಟ್ಟು</td><td>23</td></tr>
</table>

</td>
</tr>
<tr>
<td>ಈ)</td>
<td>ರಾಜ್ಯದ ಅನುದಾನಿತ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು 2019-2020ನೇ ಸಾಲಿನಲ್ಲಿ ನೀಡಿದ ಅನುಮತಿ ಆಧಾರದಲ್ಲಿ ಇದುವರೆಗೂ ನೇಮಕಾತಿ ಆದೇಶ ನೀಡದಿರಲು ಕಾರಣವೇನು;</td>
<td>

2019-2020 ನೇ ಸಾಲಿನಲ್ಲಿ ನೀಡಿದ ಅನುಮತಿ ಆಧಾರದಲ್ಲಿ ಬೋಧಕ ಬ್ಯಾಕ್‌ಲಾಗ್ ಹುದ್ದೆಗಳನ್ನು (Teaching post) ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2024 ದಿ:07.06.2024 ರಲ್ಲಿ ಗ್ರೂಪ್-ಡಿ ಮತ್ತು ಸಮಾನಂತರ ಹುದ್ದೆ ಮತ್ತು ಗ್ರೂಪ್-ಸಿ ಹುದ್ದೆಗಳಾದ ಬೆರಳಚ್ಚುಗಾರರು/ದತ್ತಾಂಶ ನಮೂದು ಸಹಾಯಕರು, ವಾಹನ ಚಾಲಕರು, ಶೀಘ್ರಲಿಪಿಗಾರರ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕವೇ ಭರ್ತಿಮಾಡತಕ್ಕದ್ದು ಎಂದು ತಿಳಿಸಲಾಗಿರುತ್ತದೆ.

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಮೀಸಲಾದ ಭರ್ತಿ ಮಾಡದ ಖಾಲಿ ಹುದ್ದೆಗಳು) (ವಿಶೇಷ ನೇಮಕಾತಿ) ನಿಯಮಗಳು 2001, ದಿನಾಂಕ:21/11/2001 ರಂದು ಜಾರಿಗೆ ಬಂದಿರುತ್ತದೆ. ಈ ನಿಯಮಗಳ 1(3)ರಲ್ಲಿ ಈ ನಿಯಮಗಳು ಪ್ರಾರಂಭವಾದ ದಿನಾಂಕದಂದು ಅಂದರೆ, ದಿನಾಂಕ: 21.11.2001 ರಂದು ಅಸ್ತಿತ್ವದಲ್ಲಿರುವ ಭರ್ತಿ ಮಾಡದ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಉದ್ದೇಶಕ್ಕಾಗಿ ಅನ್ವಯವಾಗುತ್ತದೆ ಎಂದು ತಿಳಿಸಲಾಗಿರುತ್ತದೆ.

</td>
</tr>
<tr>
<td>ಉ)</td>
<td>ಬ್ಯಾಕ್‌ಲಾಗ್ ಹುದ್ದೆ ಭರ್ತಿ ಕಾರ್ಯ ಕುರಿತಂತೆ ಹಣಕಾಸು ಇಲಾಖೆಯ ಅನುಮತಿ ಅಗತ್ಯವಿದ್ದುದಾಗಿ ಇಲಾಖೆಯು ಭಾವಿಸಿದ್ದಲ್ಲಿ ಸದರಿ ಅಡಚಣೆ ನಿವಾರಣೆಗೆ ಸಚಿವ ಸಂಪುಟ ಉಪ ಸಮಿತಿಯು ಒದಗಿಸಿರುವ</td>
<td>

**ಕಾಲೇಜು ಶಿಕ್ಷಣ ಇಲಾಖೆ**

ಬ್ಯಾಕ್‌ಲಾಗ್ ಹುದ್ದೆಗಳನ್ನು ಮಂಜೂರಾದ ಖಾಲಿ ಹುದ್ದೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ತುರ್ತಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

</td>
</tr>
</table>

| | | |
|---|---|---|
| | ಸೂಚನೆ ಹಾಗೂ ಶಿಫಾರಸ್ಸುಗಳ ಆಧಾರದಲ್ಲಿ ಹಣಕಾಸು ಇಲಾಖೆಯ ಮರು ಒಪ್ಪಿಗೆಗೆ ಕಾಯದೆ ನೇಮಕಾತಿ ಆದೇಶ ಒದಗಿಸಲು ಸರ್ಕಾರಕ್ಕೆ ಇರುವ ಅಡಚಣೆಗಳಾವುವು; ಬ್ಯಾಕ್‌ಲಾಗ್ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? | **ತಾಂತ್ರಿಕ ಶಿಕ್ಷಣ ಇಲಾಖೆ**<br>ಅನುದಾನಿತ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಪ್ರಸ್ತಾವನೆಗೆ ಸಂಬಂಧಿಸಿದಂತೆ ಅನುದಾನಿತ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ದಿನಾಂಕ: 21.11.2001 ರಂದು ಅಸ್ತಿತ್ವದಲ್ಲಿರುವ ಭರ್ತಿ ಮಾಡದ ಖಾಲಿ ಹುದ್ದೆಗಳ ಮಾಹಿತಿಯನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಂದ ಪಡೆದು ನಿಯಮಾನುಸಾರ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |

ಇಡಿ 50 ಯುಪಿಸಿ 2025 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

ಅನುಬಂಧ

## ಕಾಲೇಜು ಶಿಕ್ಷಣ ಇಲಾಖೆ

## ಜೂನ್-2023 ರಿಂದ ಇಲ್ಲಿಯವರೆಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿರುವ ಬಗ್ಗೆ ವಿವರಗಳು

| ಕ್ರಮ ಸಂಖ್ಯೆ | ಆಡಳಿತ ಮಂಡಳಿ/ ಕಾಲೇಜಿನ ಹೆಸರು | ಬೋಧಕರು | ಬೋಧಕೇತರರು | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| 1 | 2 | 3 | 4 | 5 |
| 1 | ರಾಷ್ಟ್ರೀಯ ಶಿಕ್ಷಣ ಸಮಿತಿ(ರಿ)., ಶಿವಮೊಗ್ಗ | 0 | 1 | 1 |
| 2 | ಎ.ಪಿ.ಎಸ್ ವಾಣಿಜ್ಯ ಕಾಲೇಜು, ಬೆಂಗಳೂರು | 1 | 0 | 1 |
| 3 | ಮೈಸೂರು ಎಜುಕೇಷನ್ ಸೊಸೈಟಿ(ರಿ)., ಬೆಂಗಳೂರು-ಎಂ.ಇ.ಎಸ್ ಕಾಲೇಜು, ಬೆಂಗಳೂರು | 0 | 1 | 1 |
| 4 | ಶ್ರೀ.ಅನ್ನದಾನೇಶ್ವರ ಕಲಾ, ವಿಜ್ಞಾನ & ವಾಣಿಜ್ಯ ಕಾಲೇಜು, ನರೇಗಲ್, ಗದಗ ಜಿಲ್ಲೆ | 1 | 0 | 1 |
| 5 | ಕೆ.ಆರ್.ಸಿ.ಇ. ಸಂಘದ ಜಿ.ಜಿ.ಡಿ ಕಲಾ, ವಾಣಿಜ್ಯ & ವಿಜ್ಞಾನ ಕಾಲೇಜು, ಬೈಲಹೊಂಗಲ, ಬೆಳಗಾವಿ ಜಿಲ್ಲೆ | 1 | 0 | 1 |
| 6 | ಬಾಪೂಜಿ ಗ್ರಾಮೀಣ ವಿಕಾಸ ಸಮಿತಿಯ ಕಲಾ & ವಾಣಿಜ್ಯ ಕಾಲೇಜು, ಸದಾಶಿವಗಡ ಕಾರವಾರ, ಉ.ಕ.ಜಿಲ್ಲೆ | 0 | 1 | 1 |
| 7 | ರಾಷ್ಟ್ರೀಯ ಶಿಕ್ಷಣ ಸಮಿತಿ(ರಿ)., ಶಿವಮೊಗ್ಗ | 1 | 0 | 1 |
| 8 | ಎ.ಎ.ಪಿ ಮಹಿಳಾ ಕಾಲೇಜು, ಚಿಕ್ಕೋಡಿ, ಬೆಳಗಾವಿ ಜಿಲ್ಲೆ | 0 | 2 | 2 |
| 9 | ಶ್ರೀ.ವೃಷಬೇಂದ್ರ ಎಜುಕೇಶನ್ ಸೊಸೈಟಿ ವ್ಯಾಪ್ತಿಯಲ್ಲಿ ಬರುವ ಎಸ್‌ವಿಇಎಸ್ ಕಲಾ ವಾಣಿಜ್ಯ ಕಾಲೇಜು, ಹಾರೂಗೇರಿ | 0 | 2 | 2 |
| 10 | ಶ್ರೀ.ವಿಜಯ ಮಹಾಂತೇಶ ವಿದ್ಯಾವರ್ಧಕ ಸಂಘದ ಶ್ರೀ.ವಿಜಯ ಮಹಾಂತೇಶ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಕಾಲೇಜು, ಇಲಕಲ್ಲ | 1 | 0 | 1 |
| 11 | ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಲಾ ವಾಣಿಜ್ಯ ಕಾಲೇಜು, ಚಿತ್ರದುರ್ಗ | 1 | 0 | 1 |
| 12 | ಶ್ರೀ.ಕಲ್ಮೇಶ್ವರ ವಿದ್ಯಾ ಪ್ರಸಾರಕ ಸಮಿತಿಯ ಕಲಾ, ವಿಜ್ಞಾನ ವಾಣಿಜ್ಯ ಕಾಲೇಜು, ಹೊಳೆ-ಆಲೂರು, ಗದಗ ಜಿಲ್ಲೆ | 0 | 1 | 1 |
| 13 | ಶ್ರೀ.ಮಲ್ಲಿಕಾರ್ಜುನ ಆಶ್ರಮ ಟ್ರಸ್ಟ್, ಶಿವಾನಂದ ಕಲಾ ವಾಣಿಜ್ಯ ಕಾಲೇಜು, ಕಾಗವಾಡ | 1 | 0 | 1 |
| 14 | ಶ್ರೀಮತಿ.ದೊಡ್ಡಲಕ್ಷ್ಮೀಬಾಯಿ ದುರ್ಗವ್ವ ಮಾದರ, ಕರ್ನಾಟಕ ಪೀಪಲ್ಸ್ ಎಜುಕೇಷನ್ ಸೊಸೈಟಿ, ಕಲಬುರಗಿ | 0 | 1 | 1 |
| 15 | ಟಾಗೋರ್ ಸ್ಮಾರಕ ಶಿಕ್ಷಣ ಸಂಸ್ಥೆ, ರಾಯಚೂರು | 0 | 1 | 1 |
| 16 | ಎಂ.ಇ.ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು | 1 | 0 | 1 |

| ಕ್ರಮ ಸಂಖ್ಯೆ | ಆಡಳಿತ ಮಂಡಳಿ/ ಕಾಲೇಜಿನ ಹೆಸರು | ಬೋಧಕರು | ಬೋಧಕೇತರರು | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| 1 | 2 | 3 | 4 | 5 |
| 17 | ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕ (ರಿ), ಬೆಂಗಳೂರು | 0 | 1 | 1 |
| 18 | ಶ್ರೀ.ವಿಜಯ ಮಹಾಂತೇಶ ವಿದ್ಯಾವರ್ಧಕ ಸಂಘದ ಎಸ್ ಆರ್ ವಸ್ತ್ರದ ಕಲಾ, ವಿಜ್ಞಾನ ವಿ.ಎಸ್.ಬೆಳ್ಳಿಹಾಳ ವಾಣಿಜ್ಯ ಕಾಲೇಜು, ಹುನಗುಂದ, ಬಾಗಲಕೋಟೆ | 1 | 0 | 1 |
| 19 | ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಕಾಲೇಜು, ಮೂಡಲಗಿ, ಬೆಳಗಾವಿ | 1 | 0 | 1 |
| 20 | ಎಸ್ ಜೆಎಂ ವಿದ್ಯಾಪೀಠ (ರಿ), ಚಿತ್ರದುರ್ಗ | 3 | 0 | 3 |
| 21 | ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಲಾ ವಾಣಿಜ್ಯ ಕಾಲೇಜು, ಚಿತ್ರದುರ್ಗ | 0 | 1 | 1 |
| 22 | ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕ (ರಿ), ಬೆಂಗಳೂರು | 0 | 1 | 1 |
| 23 | ಶ್ರೀ.ಜಗಜ್ಯೋತಿ ಬಸವೇಶ್ವರ ಸಹಕಾರ ಸಂಘ (ನಿ) ಬೆಂಗಳೂರು | 0 | 1 | 1 |
| 24 | ಕನಕದಾಸ ಶಿಕ್ಷಣ ಸಮಿತಿ ಕಲಾ, ವಾಣಿಜ್ಯ & ವಿಜ್ಞಾನ ಕಾಲೇಜು, ಗದಗ | 0 | 1 | 1 |
| 25 | ಪೌರಸೇವಾ ಸಮಿತಿ, (ರಿ), ಹರಿಹರ | 0 | 1 | 1 |
| 26 | ದೇಶೀಯ ವಿದ್ಯಾಶಾಲಾ ಸಮಿತಿ(ರಿ)., ಶಿವಮೊಗ್ಗ | 2 | 0 | 2 |
| 27 | ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ | 3 | 0 | 3 |
| | **ಒಟ್ಟು** | **18** | **16** | **34** |

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 98 ಯುಪಿಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:13-08-2020

ಇಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

**ಇವರಿಗೆ:**
ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.

ಮಾನ್ಯರೆ,

ವಿಷಯ: ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಗಳನ್ನು 2020-21ನೇ ಸಾಲಿನಲ್ಲಿ ಪರಿಗಣಿಸದಿರುವ ಬಗ್ಗೆ.

ಉಲ್ಲೇಖ:
1. ಪತ್ರ ಸಂಖ್ಯೆ:ಕಾಶಿಇ/19/ಬ್ಯಾ.ಲಾ.ಹು/ಕ.ಕ.ಮೀ/2020-21/ನೇ.ವಿ-2, ದಿನಾಂಕ:04-07-2020.
2. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 3 ಬಿಇಎಂ 2020, ದಿನಾಂಕ:06-07-2020.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ(1)ರ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಉಲ್ಲೇಖಿತ(2)ರ ಆರ್ಥಿಕ ಇಲಾಖೆಯ ಸುತ್ತೋಲೆಯಲ್ಲಿ ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ, ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಅನುಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ ಎಂದು ತಿಳಿಸಲಾಗಿದೆ (ಪ್ರತಿ ಲಗತ್ತಿಸಿದೆ). ಆದ್ದರಿಂದ, ಆರ್ಥಿಕ ಇಲಾಖೆಯ ಮುಂದಿನ ಆದೇಶದವರೆಗೆ ಪ್ರಸ್ತಾವನೆಯನ್ನು ಪರಿಗಣಿಸದಿರುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

**(ಜೆ.ಟಿ. ವೆಂಕಟರಾಮ)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

09 DEC 2022

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 56 ಯುಪಿಸಿ 2019 (ಇ),

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18-07-2022

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಅಡಕ ಶಾಖೆ
662
ಸಂಖ್ಯೆ.........
ದಿನಾಂಕ: 19 JUL 2022

ಇವರಿಗೆ:
ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.

ಮಾನ್ಯರೆ,

ವಿಷಯ: ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.
ಉಲ್ಲೇಖ: ತಮ್ಮ ಪತ್ರ ಸಂಖ್ಯೆ:ಕಾಶಿಇ/112/ಬ್ಯಾಕ್‌ಲಾಗ್/2011-12ನೇ.ವಿ-2 (ಭಾಗ-4) ದಿ:08.03.2022

*******

ಮೇಲ್ಕಂಡ ವಿಷಯಕ್ಕೆ ಸಬಂಧಿಸಿದಂತೆ, ಉಲ್ಲೇಖಿತ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD 347 EXP8/2022, ದಿನಾಂಕ:08-07-2022 ರಲ್ಲಿ ನೀಡಿರುವ ಅಭಿಪ್ರಾಯವು ಈ ಕೆಳಕಂಡಂತಿದೆ.

> "The proposal of the Administrative department has been examined. The Administrative department is advised to identify the vacant posts in aided colleges that are eligible to be filled up (as per the govt policy based on the work load, student strength and result) under the same management and fill them up to compensate the backlog. Any future vacancy arising in the same management should be reserved for compensating the backlog posts."

ಆರ್ಥಿಕ ಇಲಾಖೆಯ ಮೇಲ್ಕಂಡ ಅಭಿಪ್ರಾಯದನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅಗತ್ಯವಿರುವ ಎಲ್ಲಾ ವಿವರವಾದ ದಾಖಲೆಗಳೊಂದಿಗೆ ಹಾಗೂ ಸ್ಪಷ್ಟ ಶಿಫಾರಸ್ಸಿನೊಂದಿಗೆ ಕಾಲೇಜುವಾರು ಪ್ರತ್ಯೇಕ ಪ್ರಸ್ತಾವನೆಗಳನ್ನು ನಿಗಧಿತ ಚೆಕ್‌ಲಿಸ್ಟ್‌ನೊಂದಿಗೆ (ಪ್ರತಿ ಲಗತ್ತಿಸಿದೆ) ಸರ್ಕಾರಕ್ಕೆ ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎಸ್. ಹರ್ಷ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಆಇ 02 ಬಿಇಎಂ 2024

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 07 06.2024.

## ಸುತ್ತೋಲೆ

ಉಲ್ಲೇಖ: 1) ಸಿಆಸುಇ 137 ಈಕಾಅ 2005 ದಿನಾಂಕ 26.7.2005
2) ಆಇ 326 ಎಫ್.ಆರ್. ಸಿ 2019 ದಿನಾಂಕ 17-12-2019
3) ಆಇ 01 ಬಿಇಎಂ 2023 ದಿನಾಂಕ 29.12.2023.

*****

1. ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977ರ ಅನ್ವಯ ಹುದ್ದೆಗಳ ಸೃಜನೆ ಅಥವಾ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸುವ ಅಂಶಗಳನ್ನು ಒಳಗೊಂಡ ಯಾವುದೇ ಪ್ರಸ್ತಾವನೆ /ಯೋಜನೆಗಳ ಕುರಿತು ಆದೇಶ ಹೊರಡಿಸುವ ಪೂರ್ವದಲ್ಲಿಯೇ ಆರ್ಥಿಕ ಇಲಾಖೆಯ ಸಹಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ. ಆರ್ಥಿಕ ಇಲಾಖೆಯಿಂದ ಹುದ್ದೆಯನ್ನು ಮಂಜೂರು ಮಾಡದ ಹೊರತು, ವಿಶ್ವವಿದ್ಯಾಲಯಗಳು ಮತ್ತು ಇತರ ಸ್ವಾಯತ್ತ ಸಂಸ್ಥೆಗಳ ಮಟ್ಟದಲ್ಲಿ ಸೃಜಿಸಲಾದ ಹುದ್ದೆಗಳಿಗೆ ಯಾವುದೇ ಮಾನ್ಯತೆ ಇರುವುದಿಲ್ಲ, ಆರ್ಥಿಕ ಇಲಾಖೆಯು ಇಂತಹ ಹುದ್ದೆಗಳ ಭರ್ತಿಗೆ ಸಹಮತಿ ನೀಡಲಾಗುವುದಿಲ್ಲ ಹಾಗೂ ಅನುದಾನ ಒದಗಿಸಲು ಕ್ರಮವಹಿಸಲಾಗುವುದಿಲ್ಲ ಎಂದು ಉಲ್ಲೇಖಿತ (2) ಮತ್ತು (3) ರ ಸುತ್ತೋಲೆಗಳಲ್ಲಿ ಸ್ಪಷ್ಟಪಡಿಸಲಾಗಿದೆ.

2. ಆರ್ಥಿಕ ಇಲಾಖೆಯ ಅನುಮೋದನೆ ಇಲ್ಲದ ಹುದ್ದೆಗಳ ಎದುರಾಗಿ ಉದ್ಭವಿಸುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದಿಲ್ಲ. ಆದರೇ ವಿಶ್ವವಿದ್ಯಾಲಯಗಳು ಮತ್ತು ಇತರ ಸ್ವಾಯತ್ತ ಸಂಸ್ಥೆಗಳು ಇಂತಹ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸುತ್ತಿರುವುದನ್ನು ಗಮನಿಸಲಾಗಿದೆ. ಅಲ್ಲದೆ ಇಂತಹ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಸಹಮತಿ ಪಡೆಯದೇ ಬ್ಯಾಕ್ ಲಾಗ್ ಹುದ್ದೆಗಳೆಂದೂ ಗುರುತಿಸಿರುತ್ತವೆ.

3. ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977ರ ಅನ್ವಯ ಆರ್ಥಿಕ ಇಲಾಖೆಯಿಂದ ಪೂರ್ವಾನುಮತಿ ಪಡೆಯದ ಹೊರತು ಇಂತಹ ಅನುಮೋದಿತವಲ್ಲದ ಹುದ್ದೆಗಳ ಎದುರಾಗಿ ಬ್ಯಾಕ್‌ಲಾಗ್ ಹುದ್ದೆಗಳು ಸೇರಿದಂತೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿರುವುದಿಲ್ಲ. ಆದುದರಿಂದ ಮೊದಲಿಗೆ, ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಬೇಕಾಗಿರುತ್ತದೆ.

**ಗ್ರೂಪ್-ಡಿ ಮತ್ತು ಸಮಾನಂತರ ಹುದ್ದೆ ಮತ್ತು ಗ್ರೂಪ್-ಸಿ ಹುದ್ದೆಗಳ ಭರ್ತಿ (ಬೆರಳಚ್ಚುಗಾರರು/ ದತ್ತಾಂಶ ನಮೂದು ಸಹಾಯಕರು (ಡಿ.ಇ.ಓ), ವಾಹನ ಚಾಲಕರು, ಶೀಘ್ರಲಿಪಿಗಾರರು)**

1) ಉಲ್ಲೇಖ (1) ರಂತೆ ಮೇಲಿನ ವೃಂದದ ಹುದ್ದೆಗಳನ್ನು (ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977ರ ಪ್ರಕಾರ (ಆರ್ಥಿಕ ಇಲಾಖೆಯಿಂದ ಅನುಮೋದಿಸಲ್ಪಟ್ಟ ಹುದ್ದೆಗಳಾಗಿದ್ದಲ್ಲಿ) ಹೊರಗುತ್ತಿಗೆ ಆಧಾರದ ಮೇಲೆ ಮಾತ್ರ ಭರ್ತಿ ಮಾಡುವುದು ರಾಜ್ಯ ಸರ್ಕಾರದ ನೀತಿಯಾಗಿದೆ.

..2

2) ಆದ್ದರಿಂದ ಅಂತಹ ವೃಂದದ ಹುದ್ದೆಗಳ ಎದುರಾಗಿ ನೇರ ನೇಮಕಾತಿಯ ಪ್ರಶ್ನೆ ಉದ್ಭವಿಸುವುದಿಲ್ಲ. ಈ ವೃಂದಗಳಲ್ಲಿ (ಬ್ಯಾಕ್‌ಲಾಗ್ ಖಾಲಿ ಹುದ್ದೆ ಸೇರಿದಂತೆ) ಯಾವುದೇ ಖಾಲಿ ಹುದ್ದೆಯನ್ನು ಹೊರಗುತ್ತಿಗೆ ಮೂಲಕವೇ ಭರ್ತಿ ಮಾಡತಕ್ಕದ್ದು.

3) ಆದಾಗ್ಯೂ, ಗ್ರೂಪ್ ಡಿ ಮತ್ತು ಸಮಾನಂತರ ಹುದ್ದೆ ಮತ್ತು ಗ್ರೂಪ್ ಸಿ ವೃಂದಗಳಲ್ಲಿ (ಬೆರಳಚ್ಚುಗಾರರು/ ದತ್ತಾಂಶ ನಮೂದು ಸಹಾಯಕರು (ಡಿ.ಇ.ಓ), ವಾಹನ ಚಾಲಕರು, ಶೀಘ್ರಲಿಪಿಗಾರರು) ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಎದುರಾಗಿ ಆಯಾ ವರ್ಗಗಳಿಗೆ ಮೀಸಲಾದ ಅಭ್ಯರ್ಥಿಗಳಿಂದಲೇ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳುವುದನ್ನು ಆಡಳಿತ ಇಲಾಖೆಗಳು ಖಚಿತಪಡಿಸಿಕೊಳ್ಳತಕ್ಕದ್ದು.

(ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿತ)

(ಡಾ. ಪಿ.ಸಿ. ಜಾಫರ್)
ಸರ್ಕಾರದ ಕಾರ್ಯದರ್ಶಿ (ಆ ಮತ್ತು ಸಂ),
ಆರ್ಥಿಕ ಇಲಾಖೆ

ಇವರಿಗೆ:

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
3) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
4) ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5) ಎಲ್ಲಾ ನಿಗಮ/ಮಂಡಳಿ/ಪ್ರಾಧಿಕಾರ/ವಿಶ್ವವಿದ್ಯಾಲಯ/ಸ್ಥಳೀಯ ಸಂಸ್ಥೆಗಳು/ಸ್ವಾಯತ್ತ ಸಂಸ್ಥೆಗಳ ಮುಖ್ಯಸ್ಥರು.
6) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
7) ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
8) ಆರ್ಥಿಕ ಇಲಾಖೆಯ ಎಲ್ಲಾ ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
9) ಕಛೇರಿ ಪ್ರತಿ